**<u>ದಿನಾಂಕ 25.03.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.</u>**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 1** ಎಂದು, ದೂರಿನ ದೃಢೀಕೃತ ಪ್ರತಿಯನ್ನು **ನಿಪಿ 2** ಎಂದು, ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿಯನ್ನು **ನಿಪಿ 3** ಎಂದು, ನಕ್ಷೆಯ ದೃಢೀಕೃತ ಪ್ರತಿಯನ್ನು **ನಿಪಿ 4** ಎಂದು, ಶವ ತನಿಖಾ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 5** ಎಂದು, ಶವ ಪರೀಕ್ಷಾ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 6** ಎಂದು, ದೋಷಾರೋಪಣ ಪಟ್ಟಿಯ ದೃಢೀಕೃತ ಪ್ರತಿಯನ್ನು **ನಿಪಿ 7** ಎಂದು, ಪೊಲೀಸ್ ಇಂಟಿಮೇಷನ್ ನ ಧೃಡಿಕೃತ ಪ್ರತಿಯನ್ನು **ನಿಪಿ 8** ಎಂದು, ಆಧಾರ್ ಕಾರ್ಡುಗಳ ನೋಟರಿ ಪ್ರತಿ(ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಗಳನ್ನು ಒಟ್ಟಾಗಿ **ನಿಪಿ 9** ಎಂದು, ಗುರುತಿನ ಚೀಟಿಯ ನೋಟರಿ ಪ್ರತಿ(ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಯನ್ನು **ನಿಪಿ 10** ಎಂದು, ವೇತನ ಪಟ್ಟಿಗಳನ್ನು **ನಿಪಿ 11** ಎಂದು, ಅಕೌಂಟ್ ಸ್ಟೇಟ್ ಮೆಂಟನ್ನು **ನಿಪಿ 12** ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**
**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**